**All India Radio: Bangalore**
**National Bulletin In Kannada**
**20.10.2025  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಹಬ್ಬದ ಋತುವಿನಲ್ಲಿ ಸ್ವದೇಶಿ ಉತ್ಪನ್ನಗಳನ್ನು ಖರೀದಿಸುವಂತೆ ದೇಶವಾಸಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಬಿಹಾರ ವಿಧಾನಸಭಾ ಚುನಾವಣೆ : ಅಂತಿಮ ಹಂತದ ಮತದಾನಕ್ಕೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನ
3. ಹಬ್ಬದ ಸಮಯದಲ್ಲಿ ಪ್ರಯಾಣಿಕರ ದಟ್ಟಣೆ ನಿವಾರಿಸಲು ೧೨ ಸಾವಿರ ಹೆಚ್ಚುವರಿ ರೈಲುಗಳ ಸಂಚಾರ - ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
4. ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ : ಭಾರತದ ವಿರುದ್ಧ ಇಂಗ್ಲೆಂಡ್ ತಂಡಕ್ಕೆ ೪ ರನ್‌ಗಳ ರೋಚಕ ಜಯ

<><><><>

ಸ್ವದೇಶಿ ಉತ್ಪನ್ನಗಳನ್ನು ಖರೀದಿಸುವ ಮೂಲಕ ಮತ್ತು ೧೪೦ ಕೋಟಿ ಭಾರತೀಯರ ಕಠಿಣ ಪರಿಶ್ರಮವನ್ನು ಆಚರಿಸುವ ಮೂಲಕ ಹಬ್ಬದ ಋತುವನ್ನು ಸ್ವಾಗತಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರು, ನಾಗರಿಕರಿಗೆ ಕರೆ ನೀಡಿದ್ದಾರೆ. ಹಬ್ಬದ ಋತುವಿನಲ್ಲಿ ತಾವು ಖರೀದಿಸಿರುವುದನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳುವಂತೆಯೂ ಪ್ರಧಾನಿ ಮೋದಿ ನಾಗರಿಕರಲ್ಲಿ ಮನವಿ ಮಾಡಿದ್ದಾರೆ. ಒತ್ತಾಯಿಸಿದರು. ಇದು ಇತರರೂ ಸಹ ಇದೇ ರೀತಿ ಮಾಡಲು ಪ್ರೇರಣೆ ನೀಡುತ್ತದೆ ಎಂದು ಅವರು ಹೇಳಿದರು. ಭಾರತದಲ್ಲಿ ತಯಾರಿಸಿದ ಉತ್ಪನ್ನಗಳನ್ನು ಖರೀದಿಸಿ - 'ಗರ್ವ್ ಸೆ ಕಹೋ ಯೇ ಸ್ವದೇಶಿ ಹೈ' ಎಂದು ಘೋಷಿಸುವ ಅಗತ್ಯವನ್ನು ಒತ್ತಿ ಹೇಳಿದರು. ಸ್ಥಳೀಯ ಕೈಗಾರಿಕೆಗಳು ಮತ್ತು ಕುಶಲಕರ್ಮಿಗಳನ್ನು ಉತ್ತೇಜಿಸಲು, ಸ್ವಾವಲಂಬನೆ ಹಾಗೂ ಮತ್ತು ಆರ್ಥಿಕ ಸಬಲೀಕರಣದ ಸಂದೇಶವನ್ನು ಬಲಪಡಿಸಲು ರಾಷ್ಟ್ರವ್ಯಾಪಿ ಆಂದೋಲನದ ನಡುವೆ ಪ್ರಧಾನಮಂತ್ರಿಯರಿಂದ ಈ ಮನವಿ ಬಂದಿದೆ. ಈ ಉಪಕ್ರಮವನ್ನು ಬೆಂಬಲಿಸುತ್ತಾ, ಒಥಿಉಊಱಟಿಜುಚಿ 'ದೀಪಾವಳಿಯನ್ನು ಆಚರಿಸಿ ಮತ್ತು ಸ್ವದೇಶಿ ಸಬಲೀಕರಣಗೊಳಿಸಿ' ಎಂಬ

ಶೀರ್ಷಿಕೆಯ ವಿಶೇಷ ಅಭಿಯಾನವನ್ನು ಪ್ರಾರಂಭಿಸಿತು. ಈ ಹಬ್ಬದ ಋತುವಿನಲ್ಲಿ ಸ್ವದೇಶಿ ಉತ್ಪನ್ನಗಳನ್ನು ಮಾತ್ರ ಖರೀದಿಸುವ ಪ್ರತಿಜ್ಞೆ ಮಾಡಲು ನಾಗರಿಕರನ್ನು ಆಹ್ವಾನಿಸಿತು. ಭಾರತದ ಸಾಂಸ್ಕೃತಿಕ ಮತ್ತು ಆರ್ಥಿಕ ರಚನೆಗೆ ಅವರ ಕರಕುಶಲತೆ ಮತ್ತು ಹಾಗೂ ಜೀವನೋಪಾಯ, ಅತ್ಯಗತ್ಯವಾಗಿರುವ ಸ್ಥಳೀಯ ಕುಶಲಕರ್ಮಿಗಳನ್ನು ಬೆಂಬಲಿಸುವ ಮಹತ್ವವನ್ನು ಈ ಅಭಿಯಾನ ಒತ್ತಿಹೇಳುತ್ತದೆ. ಈ ಅಭಿಯಾನವು ಗ್ರಾಹಕರಲ್ಲಿ ಜಾಗೃತಿ ಮತ್ತು ಹೆಮ್ಮೆಯ ಪರಿಣಾಮವನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ವೈಯಕ್ತಿಕ ಆಯ್ಕೆಯನ್ನು ರಾಷ್ಟ್ರೀಯ ಪ್ರಗತಿಯೊಂದಿಗೆ ಜೋಡಿಸುತ್ತದೆ. ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಆಳವಾಗಿ ಬೇರೂರಿರುವ ಸ್ವದೇಶಿ ಚಳುವಳಿಯು ಇತ್ತೀಚಿನ ವರ್ಷಗಳಲ್ಲಿ ಸರ್ಕಾರದ 'ಆತ್ಮನಿರ್ಭರ ಭಾರತ' ಉಪಕ್ರಮದ ನಿರ್ಣಾಯಕ ಆಧಾರಸ್ತಂಭವಾಗಿ ಮತ್ತೆ ವೇಗವನ್ನು ಪಡೆದುಕೊಂಡಿದೆ.

<><><><>

ಬಿಹಾರ ವಿಧಾನಸಭಾ ಚುನಾವಣೆಯ ಎರಡನೇ ಮತ್ತು ಅಂತಿಮ ಸುತ್ತಿನ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಇಂದು ಮುಕ್ತಾಯಗೊಳ್ಳಲಿದೆ. ಈ ಹಂತದ ಮತದಾನ ನವೆಂಬರ್ ೧೧ ರಂದು ರಾಜ್ಯದ ೨೦ ಜಿಲ್ಲೆಗಳ ೧೨೨ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆಯಲಿದೆ. ಅಭ್ಯರ್ಥಿಗಳು ಇದೇ ೨೩ ರವರೆಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಮೊದಲ ಹಂತಕ್ಕೆ ನಾಮಪತ್ರಗಳನ್ನು ಹಿಂಪಡೆಯಲು ಇಂದು ಕೊನೆಯ ದಿನವಾಗಿದೆ. ಈ ಸುತ್ತಿನಲ್ಲಿ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಈಗಾಗಲೇ ಬಿಜೆಪಿ ಮತ್ತು ಜೆಡಿಯು, ಚುನಾವಣಾ ಪ್ರಚಾರಕ್ಕಾಗಿ ತಮ್ಮ ಸ್ಟಾರ್ ಪ್ರಚಾರಕರನ್ನು ನಿಯೋಜಿಸಿವೆ. ದೀಪಾವಳಿಯ ನಂತರ ಪ್ರಚಾರ ಇನ್ನಷ್ಟು ತೀವ್ರಗೊಳ್ಳುವ ನಿರೀಕ್ಷೆಯಿದೆ.

<><><><>

ಬಿಹಾರದಲ್ಲಿ ಸಂಪೂರ್ಣ ಚುನಾವಣಾ ಪ್ರಕ್ರಿಯೆಯನ್ನು ಮತ್ತು ಇತರೆ ರಾಜ್ಯಗಳ ೮ ವಿಧಾನಸಭಾ ಕ್ಷೇತ್ರಗಳಲ್ಲಿನ ಉಪಚುನಾವಣೆಗಳನ್ನು ಸೂಕ್ಷ್ಮವಾಗಿ ಗಮನಿಸುವಂತೆ ಚುನಾವಣಾ ಆಯೋಗ ಕೇಂದ್ರೀಯ ವೀಕ್ಷಕರನ್ನು ಕೇಳಿಕೊಂಡಿದೆ. ಬಿಹಾರದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಮೊದಲ ಹಂತಕ್ಕೆ ೧೨೧ ಸಾಮಾನ್ಯ ವೀಕ್ಷಕರು ಮತ್ತು ೧೮ ಪೊಲೀಸ್ ವೀಕ್ಷಕರು ಎರಡನೇ ಹಂತಕ್ಕೆ ೧೨೨ ಸಾಮಾನ್ಯ ವೀಕ್ಷಕರು ಮತ್ತು ೨೦ ಪೊಲೀಸ್ ವೀಕ್ಷಕರನ್ನು ನಿಯೋಜಿಸಲಾಗಿದೆ ಎಂದು ಆಯೋಗ ತಿಳಿಸಿದೆ. ಇದಲ್ಲದೆ, ಉಪ ಚುನಾವಣೆಗೆ ೮ ಸಾಮಾನ್ಯ ಮತ್ತು ೮ ಪೊಲೀಸ್

ವೀಕ್ಷಕರನ್ನು ಸಹ ನೇಮಿಸಲಾಗಿದೆ. ರಾಜಕೀಯ ಪಕ್ಷಗಳು, ಅಭ್ಯರ್ಥಿಗಳು ಹಾಗೂ ಮತದಾರರ ಕುಂದುಕೊರತೆಗಳನ್ನು ಪರಿಹರಿಸಲು ವೀಕ್ಷಕರಿಗೆ ಸಂಪೂರ್ಣವಾಗಿ ಲಭ್ಯವಿರಲು ಸೂಚಿಸಲಾಗಿದೆ. ಮತದಾನ ಕೇಂದ್ರಗಳಿಗೆ ಭೇಟಿ ನೀಡಲು ಮತ್ತು ಮತದಾರರ ಅನುಕೂಲಕ್ಕಾಗಿ ಆಯೋಗವು ತೆಗೆದುಕೊಂಡ ಉಪಕ್ರಮಗಳ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ವೀಕ್ಷಕರಿಗೆ ಸೂಚನೆ ನೀಡಲಾಗಿದೆ.

<><><>

ಹಬ್ಬದ ಸಮಯದಲ್ಲಿ ಪ್ರಯಾಣಿಕರ ಸುರಕ್ಷತೆ ಮತ್ತು ಅನುಕೂಲತೆಯನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ದೆಹಲಿಯ ಆನಂದ್ ವಿಹಾರ್ ರೈಲು ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಹಬ್ಬದ ಸಮಯದಲ್ಲಿ ಪ್ರಯಾಣಿಕರ ದಟ್ಟಣೆಯನ್ನು ನಿಭಾಯಿಸಲು ವಿಶೇಷ ವ್ಯವಸ್ಥೆಗಳನ್ನು ಮಾಡಲಾಗಿದೆ. ಪ್ರಯಾಣಿಕರು ತಮ್ಮ ಸ್ಥಳಗಳನ್ನು ತಲುಪಲು ಅನುಕೂಲವಾಗುವಂತೆ ೧೨ ಸಾವಿರ ಹೆಚ್ಚುವರಿ ರೈಲುಗಳ ಸಂಚಾರಕ್ಕೆ ಅನುವು ಮಾಡಲಾಗಿದೆ ಎಂದು ತಿಳಿಸಿದರು. ಜನಸಂದಣಿ ನಿರ್ವಹಣೆ ಪ್ರಯಾಣಿಕರ ಸೌಲಭ್ಯಗಳಿಗಾಗಿ ಈ ಸಮಗ್ರ ವ್ಯವಸ್ಥೆಗಳು, ದೀಪಾವಳಿ ಮತ್ತು ಛತ್‌ನಂತಹ ಪ್ರಮುಖ ಹಬ್ಬಗಳಲ್ಲಿ ಲಕ್ಷಾಂತರ ಪ್ರಯಾಣಿಕರಿಗೆ ಸುಗಮ ಹಾಗೂ ಸುರಕ್ಷಿತ ಪ್ರಯಾಣವನ್ನು ಖಚಿತಪಡಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು. ತಮ್ಮ ಭೇಟಿಯ ಸಮಯದಲ್ಲಿ, ಪ್ರಯಾಣಿಕರೊಂದಿಗೆ ಸಚಿವರು ಸಂವಾದ ನಡೆಸಿದರು. ರೈಲ್ವೆ ಕಾರ್ಯಾಚರಣೆಗಳಿಗೆ ಸಂಬಂಧಿಸಿದಂತೆ ತಪ್ಪುದಾರಿಗೆಳೆಯುವ ವಿಡಿಯೋಗಳನ್ನು ಪ್ರಸಾರ ಮಾಡದಂತೆ ಹಾಗೂ ಹಂಚಿಕೊಳ್ಳದಂತೆ ಸಚಿವ ಅಶ್ವಿನಿ ವೈಷ್ಣವ್, ಇದೇ ವೇಳೆ ನಾಗರಿಕರಿಗೆ ಮನವಿ ಮಾಡಿದರು.

ಧ್ವನಿ : ಅಶ್ವಿನಿ ವೈಷ್ಣವ್ (೨೫ ಸೆಕೆಂಡ್‌ಗಳು)

<><><>

ದೀಪಾವಳಿ ಹಬ್ಬದ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ರಾಷ್ಟ್ರದ ಜನತೆಗೆ ಶುಭಾಶಯಗಳನ್ನು ಕೋರಿದ್ದಾರೆ. ದೀಪಾವಳಿಯು ಭಾರತದ ಅತ್ಯಂತ ಜನಪ್ರಿಯ ಹಬ್ಬಗಳಲ್ಲಿ ಒಂದಾಗಿದೆ. ಇದನ್ನು ಅತ್ಯಂತ ಉತ್ಸಾಹದಿಂದ ಆಚರಿಸಲಾಗುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಈ ಹಬ್ಬವು ಕತ್ತಲೆಯ ಮೇಲೆ ಬೆಳಕು,

ಅಜ್ಞಾನದ ಮೇಲೆ ಜ್ಞಾನ ಮತ್ತು ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸಂಕೇತಿಸುತ್ತದೆ. ಸಂತೋಷದ ಹಬ್ಬವು ಸ್ವಯಂ ಪ್ರತಿಬಿಂಬ ಮತ್ತು ಸ್ವಯಂ ಸುಧಾರಣೆಗೆ ಒಂದು ಸಂದರ್ಭವಾಗಿದೆ. ಇದು ಪರಸ್ಪರ ವಾತ್ಸಲ್ಯ ಹಾಗೂ ಸಹೋದರತ್ವದ ಸಂದೇಶವನ್ನು ನೀಡುತ್ತದೆ ಎಂದು ಅವರು ಹೇಳಿದರು. ದೀಪಾವಳಿಯನ್ನು ಸುರಕ್ಷಿತವಾಗಿ, ಜವಾಬ್ದಾರಿಯುತವಾಗಿ ಮತ್ತು ಪರಿಸರ ಸ್ನೇಹಿ ರೀತಿಯಲ್ಲಿ ಆಚರಿಸಲು ಅವರು ಎಲ್ಲರನ್ನು ಒತ್ತಾಯಿಸಿದ್ದಾರೆ. ಈ ದೀಪಾವಳಿ ಎಲ್ಲರಿಗೂ ಸಂತೋಷ, ಶಾಂತಿ ಮತ್ತು ಸಮೃದ್ಧಿಯನ್ನು ತರಲಿ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಾರ್ಥಿಸಿದ್ದಾರೆ. ದೀಪಾವಳಿಯು ಕೆಟ್ಟದ್ದರ ಮೇಲೆ ಒಳ್ಳೆಯತನದ ವಿಜಯವನ್ನು ಮತ್ತು ಅಜ್ಞಾನದ ಮೇಲೆ ಜ್ಞಾನದ ವಿಜಯವನ್ನು ಆಚರಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಲಕ್ಷ್ಮಿ ದೇವಿಯ ಆಶೀರ್ವಾದ ಎಲ್ಲರಿಗೂ ಲಭಿಸುವಂತೆ ಅವರು ಪ್ರಾರ್ಥಿಸಿದ್ದಾರೆ. ಈ ದೀಪಗಳ ಹಬ್ಬವು ಪ್ರತಿಯೊಬ್ಬ ನಾಗರಿಕರ ಜೀವನವನ್ನು ಸಾಮರಸ್ಯ, ಸಂತೋಷ ಮತ್ತು ಸಮೃದ್ಧಿಯಿಂದ ಬೆಳಗಿಸಲಿ. ದೇಶಾದ್ಯಂತ ಸಕಾರಾತ್ಮಕತೆಯ ಮನೋಭಾವ ಮೇಲುಗೈ ಸಾಧಿಸಲಿ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರಾರ್ಥಿಸಿದ್ದಾರೆ. ದೀಪಾವಳಿ ಹಬ್ಬವು ಭಾರತದ ಸಂಸ್ಕೃತಿ ಮತ್ತು ಸಂಪ್ರದಾಯಗಳ ಆತ್ಮ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ದೀಪಗಳನ್ನು ಬೆಳಗಿಸಿ ಆಚರಿಸುವ ಹಬ್ಬ ಮಾತ್ರವಲ್ಲ, ಕತ್ತಲೆಯ ಮೇಲೆ ಬೆಳಕಿನ ವಿಜಯ, ಅಜ್ಞಾನದ ಮೇಲೆ ಜ್ಞಾನ ಹಾಗೂ ಹತಾಶೆಯ ಮೇಲೆ ಭರವಸೆಯ ವಿಜಯದ ಸಂದೇಶವೂ ಆಗಿದೆ ಎಂದು ಅವರು ಹೇಳಿದರು. ಸಮಾಜದಲ್ಲಿ ಏಕತೆ, ಸಹೋದರತ್ವ, ಪರಸ್ಪರ ನಂಬಿಕೆ ಮತ್ತು ಸಮಾನತೆಯನ್ನು ಬಲಪಡಿಸಲು ಈ ಶುಭ ಸಂದರ್ಭದಲ್ಲಿ ಪ್ರತಿಜ್ಞೆ ಮಾಡುವಂತೆ ಲೋಕಸಭಾಧ್ಯಕ್ಷರು ನಾಗರಿಕರನ್ನು ಮನವಿ ಮಾಡಿದರು.

<><><><>

ಇಂದು ವಿಶ್ವ ಆಸ್ಟಿಯೊಪೊರೋಸಿಸ್ ದಿನವನ್ನು ಆಚರಿಸಲಾಗುತ್ತಿದೆ. ಆಸ್ಟಿಯೊಪೊರೋಸಿಸ್ ತಡೆಗಟ್ಟಲು ಆಯುರ್ವೇದದ ತಡೆಗಟ್ಟುವ ಕ್ರಮಗಳು, ಸಮತೋಲಿತ ಪೋಷಣೆ ಮತ್ತು ಸೌಮ್ಯ ದೈಹಿಕ ಚಟುವಟಿಕೆಯನ್ನು ಅಳವಡಿಸಿಕೊಳ್ಳುವಂತೆ ಆಯುಷ್ ಸಚಿವಾಲಯ ನಾಗರಿಕರನ್ನು, ವಿಶೇಷವಾಗಿ ವೃದ್ಧರನ್ನು ಮತ್ತು ಋತುಬಂಧದ ನಂತರದ ಮಹಿಳೆಯರನ್ನು ಒತ್ತಾಯಿಸಿದೆ.

<><><><>

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಭಾರತದ ವನಿತಾ ತಂಡದ ವಿರುದ್ಧ ಇಂಗ್ಲೆಂಡ್ ೪ ರನ್‌ಗಳ ರೋಚಕ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್, ನಿಗದಿತ ೫೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೨೮೮ ರನ್ ಗಳಿಸಿತು. ಈ ಗುರಿಯನ್ನು ಬೆನ್ನತ್ತಿದ ಭಾರತ, ನಿಗದಿತ ೫೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೮೪ ರನ್ ಗಳಿಸಲಷ್ಟೇ ಶಕ್ತವಾಯಿತು. ಸ್ಮೃತಿ ಮಂಧಾನ, ಹರ್ಮನ್‌ಪ್ರೀತ್ ಕೌರ್ ಮತ್ತು ದೀಪ್ತಿ ಶರ್ಮಾ ಅವರ ಅರ್ಧ ಶತಕ, ಗೆಲುವಿನ ಹೊಸ್ತಿಲಿಗೆ ತಂದರೂ ಪಂದ್ಯ ಗೆಲ್ಲಲು ಸಾಧ್ಯವಾಗಲಿಲ್ಲ.

<><><><>

ಆಂಧ್ರಪ್ರದೇಶ, ಕೇರಳ, ಮಾಹೆ ಮತ್ತು ಲಕ್ಷದ್ವೀಪಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ತಿಂಗಳ ೨೨ ರವರೆಗೆ ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡು, ತಮಿಳುನಾಡು, ಪುದುಚೇರಿ, ಕಾರೈಕಲ್, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>